# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಶ್ರೀಕಾಂತ್ ಯಡ್ರಾಂವಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹಂದಿಗುಂದ ಗ್ರಾಮ ಪಂಚಾಯತಿ, ರಾಯಭಾಗ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಕುರಿತು.

**ಓದಲಾಗಿದೆ:**

1) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಅ.ಸ.ಪ.ಸಂ. Compt/UPLOK/BGM/1055/2016/PP, ದಿನಾಂಕ:16.03.2017
2) ಮಾನ್ಯ ಉಪಲೋಕಾಯುಕ್ತ-1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ವರದಿ ಸಂಖ್ಯೆ: ಕಂಪ್ಲೆಂಟ್/ಉಪಲೋಕ್/ಬಿಜಿಎಂ-1055/2016/ಪಿಪಿ, ದಿ.04.03.2017

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ: 04.03.2017 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಶ್ರೀ ವಸಂತ ರಾಮನಗೌಡ ಅಂದಾನಿ (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ಇವರು ಲೋಕಾಯುಕ್ತ ಸಂಸ್ಥೆಗೆ ದೂರು ಸಲ್ಲಿಸಿ, ಬೆಳಗಾವಿ ಜಿಲ್ಲೆಯ ರಾಯಭಾಗ ತಾಲ್ಲೂಕಿನ ಹಂದಿಗುಂದ ಗ್ರಾಮದ ವಾರ್ಡ ನಂ.1 ರಲ್ಲಿ ತಾವು ವಾಸವಾಗಿದ್ದು, ತಮ್ಮ ಮನೆಯ ಗೋಡೆಗೆ ಹತ್ತಿರವಾಗಿ ಸಾರ್ವಜನಿಕ ರಸ್ತೆಯಲ್ಲಿ ಶ್ರೀ ಆನಂದ ಕೋರಿಶೆಟ್ಟಿ ಎಂಬುವವರು ತಮ್ಮ ಮನೆಯ ಶೌಚಾಲಯದ ಸೆಪ್ಟಿಕ್ ಟ್ಯಾಂಕ್ ಮತ್ತು ನೀರು ಇಂಗುವ ಗುಂಡಿಯನ್ನು ನಿರ್ಮಿಸುವಾಗ ದೂರುದಾರರು ಗ್ರಾಮ ಪಂಚಾಯತಿಯಲ್ಲಿ ತಕರಾರರು ಅರ್ಜಿಯನ್ನು ಸಲ್ಲಿಸಿದ್ದು, ಅದಕ್ಕೆ ಶ್ರೀ ಕೋರಿಶೆಟ್ಟಿಯವರಾಗಲೀ, ಗ್ರಾಮ ಪಂಚಾಯತಿಯವರಾಗಲೀ ಸ್ಪಂದಿಸಿರುವುದಿಲ್ಲ. ಸದರಿ ಶ್ರೀ ಕೋರಿಶೆಟ್ಟಿಯವರು ನಿರ್ಭಯವಾಗಿ ತಮ್ಮ ಶೌಚಾಲಯದ ಕಟ್ಟಡದ ಕಾಮಗಾರಿಯನ್ನು ಮುಂದುವರೆಸಿರುತ್ತಾರೆ. ಅದಾದನಂತರ ದಿನಾಂಕ 19.08.2015 ರಂದು ಮತ್ತು ದಿನಾಂಕ 24.08.2015 ರಂದು ಗ್ರಾಮ ಪಂಚಾಯತಿಗೆ ಅರ್ಜಿಗಳನ್ನು ಸಲ್ಲಿಸಿ ತಮ್ಮ ಆಕ್ಷೇಪಣೆಯನ್ನು ವ್ಯಕ್ತಪಡಿಸಿದರೂ ಸಹ ಪಂಚಾಯತಿ ಅಭಿವೃದ್ಧಿ ಅಧಿಕಾರಿಯವರು ಯಾವುದೇ ರೀತಿಯ ಪ್ರತಿಕ್ರಿಯೆ ನೀಡಿರುವುದಿಲ್ಲ. ಸದರಿ ಶ್ರೀ ಕೋರಿಶೆಟ್ಟಿಯವರು ಶೌಚಾಲಯದ ಕಾಮಗಾರಿಯನ್ನು ಮುಗಿಸಿ ಶೌಚಾಲಯ ಉಪಯೋಗಿಸುತ್ತಿದ್ದಾರೆ. ಇದರಿಂದ, ಶೌಚಾಲಯದ ಇಂಗುತೊಟ್ಟಿಯ ನೀರು ದೂರುದಾರರ ಮನೆಯ ಮಣ್ಣಿನ ಗೋಡೆಗಡ ತಾಗಿ ಗೋಡೆ ಬೀಳು ಅಪಾಯದಲ್ಲಿರುತ್ತದೆ. ಆದ್ದರಿಂದ, ಸಾರ್ವಜನಿಕ ರಸ್ತೆಯಲ್ಲಿ ಕಟ್ಟಿರುವ ಇಂಗು ತೊಟ್ಟಿಯನ್ನು ತೆರವುಗೊಳಿಸಲು ರದುರುದಾರರಿಗೆ ನೀಡಿದ ಮನವಿಯನ್ನು ಎದುರುದಾರರು ಇದುವರೆಗೂ ಪರಿಗಣಿಸದೇ ಇರುವ ಪ್ರಯುಕ್ತ, ಇವರ ವಿರುದ್ಧ ಕ್ರಮ ಜರುಗಿಸಬೇಕೆಂದು ಮತ್ತು ತನಗೆ ಉಂಟಾಗಿರುವ ತೊಂದರೆಯನ್ನು ನಿವಾರಿಸಬೇಕೆಂದು ಕೋರಿದ್ದು, ಸದರಿ ದೂರಿನ ಆಧಾರದ ಮೇಲೆ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಕಲಂ ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ತನಿಖೆಗೆ ಆದೇಶಿಸಲಾಗಿರುತ್ತದೆ.

ತನಿಖೆಯನ್ನು ಕೈಗೊಳ್ಳಲಾಗಿ, ಪ್ರಕರಣದಲ್ಲಿ ಭಾಗಿಯಾಗಿರುವ ಶ್ರೀ ಶ್ರೀಕಾಂತ್ ಯಡ್ರಾಂವಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹಂದಿಗುಂದ ಗ್ರಾಮ ಪಂಚಾಯತಿ, ರಾಯಭಾಗ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರು ಈ ಬಗ್ಗೆ ಯಾವುದೇ ಆಕ್ಷೇಪಣೆಗಳನ್ನು ಸಲ್ಲಿಸಿರುವುದಿಲ್ಲ ಹಾಗೂ ಹಂದಿಗುಂದ ಗ್ರಾಮದ ವಾರ್ಡ್ ನಂ.1 ರಲ್ಲಿರುವ ಶ್ರೀ ಆನಂದ ಮ.ಕೋರಿಶೆಟ್ಟಿಯವರು ಸಾರ್ವಜನಿಕ ರಸ್ತೆಯ ಮಧ್ಯದಲ್ಲಿ ತಮ್ಮ ಮನೆಯ ಶೌಚಾಲಯದ ಇಂಗು ಗುಂಡಿಯನ್ನು ನಿರ್ಮಿಸಿ ಸೆಪ್ಟಿಕ್ ಟ್ಯಾಂಕ್ ನಿಂದ ಸದರಿ ಇಂಗು ಗುಂಡಿಯ ಒಳಗೆ ನೀರು ಹರಿದು ಅಲ್ಲಿದಂ ಶೌಚಾಲಯದ ನೀರನ್ನು ಚರಂಡಿಗೆ ತಲುಪುವಂತೆ ಮಾಡಿರುವಿದನ್ನು ತೆರವುಗೊಳಿಸುವ ನಿಟ್ಟಿನಲ್ಲಿ ಯಾವುದೇ ಕ್ರಮ ಕೈಗೊಳ್ಳದೇ ಹಾಗೂ ಈ ರೀತಿ ಮಾಡುವುದರಿಂದ ಪರಿಸರ ಹಾಳಾಗುವುದಲ್ಲದೆ ರೋಗ ಹರಡಲು ಕಾರಣವಾಗುತ್ತದೆಂಬುದನ್ನು ಪರಿಗಣಿಸದೇ ಕರ್ತವ್ಯಲೋಪ ಎಸಗಿರುವುದು ಸ್ಪಷ್ಟಪಡುವುದರಿಂದ. ಈ ಹಿನ್ನೆಲೆಯಲ್ಲಿ ಕರ್ನಾಟಕ ನಾಗರೀಕ ಸೇವೆ (ನಡತೆ) ನಿಯಮಗಳು 1966 ರ ನಿಯಮ 3(1)(ii) ಮತ್ತು (iii) ರನ್ವಯ ಎದುರುದಾರರು ಶಿಸ್ತು ಕ್ರಮಕ್ಕೆ ಭಾದ್ಯರಾಗಿರುತ್ತಾರೆಂದು ತಿಳಿದು ಬಂದದ್ದರಿಂದ ಎದುರುದಾರರಾದ ಶ್ರೀ ಶ್ರೀಕಾಂತ್ ಯಡ್ರಾಂವಿ. ಪಂಚಾಯತಿ ಅಭಿವೃದ್ಧಿ ಅಧಿಕಾರಿ. ಹಂದಿಗುಂದ ಗ್ರಾಮ ಪಂಚಾಯತಿ, ರಾಯಭಾಗ ತಾಲ್ಲೂಕು. ಬೆಳಗಾವಿ ಜಿಲ್ಲೆ ಇವರ ವಿರುದ್ಧ ಶಿಸ್ತು ನಡವಳಿಕೆ ಜರುಗಿಸಲು ಹಾಗೂ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ. ನಿರ್ಬಂಧ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 14(ಎ) ರಡಿಯಲ್ಲಿ ಇಲಾಖಾ ವಿಚಾರಣೆ ನಡೆಸಲು ಲೋಕಾಯುಕ್ತ ಪ್ರಾಧಿಕಾರಕ್ಕೆ ಒಪ್ಪಿಸುವಂತೆ . ಕರ್ನಾಟಕ ಲೋಕಾಯುಕ್ತ ಕಾಯ್ದೆ ಕಲಂ 12(3) ರನ್ವಯ ಪ್ರದತ್ತವಾದ ಅಧಿಕಾರದಡಿ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ, ಎದುರುದಾರರ ವಿರುದ್ಧ ಇಲಾಖಾ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14–ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 241 ಗ್ರಾಪಂಕಾ 2017, ಬೆಂಗಳೂರು, ದಿನಾಂಕ: 31.03.2017**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಶ್ರೀಕಾಂತ್ ಯಡ್ರಾಂವಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹಂದಿಗುಂದ ಗ್ರಾಮ ಪಂಚಾಯತಿ, ರಾಯಭಾಗ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11 ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳ ನಿಯಮ 14–ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ–8 ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಟಿ.ವಿ.ಅರುಣ್ ಕುಮಾರ್)**
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತ–1 ರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
   (ಮೇಲೆ ಓದಲಾದ ಪತ್ರದಲ್ಲಿ ಸಲ್ಲಿಸಲಾದ ಮೂಲ ದಾಖಲಾತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲಾಗಿದೆ)
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಬೆಳಗಾವಿ ಜಿಲ್ಲಾ ಪಂಚಾಯತಿ, ಬೆಳಗಾವಿ.
5) ಕಾರ್ಯನಿರ್ವಾಹಕ ಅಧಿಕಾರಿ, ರಾಯಭಾಗ ತಾಲ್ಲೂಕು ಪಂಚಾಯತಿ, ರಾಯಭಾಗ, ಬೆಳಗಾವಿ ಜಿಲ್ಲೆ.
6) ಶ್ರೀ ಶ್ರೀಕಾಂತ್ ಯಡ್ರಾಂವಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹಂದಿಗುಂದ ಗ್ರಾಮ ಪಂಚಾಯತಿ, ರಾಯಭಾಗ ತಾಲ್ಲೂಕು, ಬೆಳಗಾವಿ ಜಿಲ್ಲೆ.
   (ಕಾರ್ಯನಿರ್ವಾಹಕ ಅಧಿಕಾರಿ, ಕುಂದಗೋಳ ತಾಲ್ಲೂಕು ಪಂಚಾಯತಿ ಇವರ ಮುಖಾಂತರ)
7) ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.